ಕರ್ನಾಟಕ ಸರ್ಕಾರ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560003

ನಮ್ಮ ಚಿತ್ತ ಪರೀಕ್ಷೆಯತ್ತ



2023-24 ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ-1, ಪರೀಕ್ಷೆ-2 ಮತ್ತು ಪರೀಕ್ಷೆ-3 ಕ್ಕೆ ಸಂಬಂಧಿಸಿದಂತೆ

ವಿದ್ಯಾರ್ಥಿಗಳು / ಶಿಕ್ಷಕರು / ಪೋಷಕರಿಗೆ ಮಾಹಿತಿ

1. 2023–24ರ ಶೈಕ್ಷಣಿಕ ವರ್ಷದಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ವತಿಯಿಂದ ಮುಖ್ಯ ಪರೀಕ್ಷೆ ಹಾಗೂ ಪೂರಕ ಪರೀಕ್ಷೆಗೆ ಬದಲಾಗಿ ಪರೀಕ್ಷೆ–1, ಪರೀಕ್ಷೆ–2 ಮತ್ತು ಪರೀಕ್ಷೆ–3 ಎಂದು ಒಟ್ಟು ಮೂರು (03) ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಆದರೆ ಮೂರೂ ಪರೀಕ್ಷೆಗಳನ್ನು ಬರೆಯುವುದು ಕಡ್ಡಾಯವಲ್ಲ.
2. ಪ್ರಥಮ ಬಾರಿಗೆ ಪರೀಕ್ಷೆ ತೆಗೆದುಕೊಳ್ಳುವ ರೆಗ್ಯುಲರ್ ವಿದ್ಯಾರ್ಥಿಗಳು ಮತ್ತು ಖಾಸಗಿ ವಿದ್ಯಾರ್ಥಿಗಳು ಪರೀಕ್ಷೆ–1ಕ್ಕೆ ನೋಂದಾಯಿಸಿಕೊಳ್ಳುವುದು ಕಡ್ಡಾಯ.
3. ಪರೀಕ್ಷೆ–1ಕ್ಕೆ ಹಾಜರಾಗುವ ರೆಗ್ಯುಲರ್ ವಿದ್ಯಾರ್ಥಿಗಳಿಗೆ ಶೇಕಡ.75ರಷ್ಟು ಹಾಜರಾತಿ ಕಡ್ಡಾಯವಾಗಿ ಇರಲೇಬೇಕು.
4. 2022–23ರ ಪ್ರಶ್ನೆಪತ್ರಿಕೆಯ ಸ್ವರೂಪ ಮತ್ತು ಕಠಿಣತೆಯ ಮಟ್ಟವನ್ನು 2023–24ನೇ ಸಾಲಿನಲ್ಲೂ ಮುಂದುವರೆಸಲಾಗಿದೆ.
5. 2023–24ರ ಮೂರು ಪರೀಕ್ಷೆಗಳ ಪ್ರಶ್ನೆಪತ್ರಿಕೆಗಳ ವಿಷಯ ಮತ್ತು ಕಠಿಣತೆಯ ಮಟ್ಟದಲ್ಲಿ ಏಕರೂಪತೆಯನ್ನು ಹೊಂದಿರುತ್ತವೆ.
6. ಪರೀಕ್ಷೆ–1ರಲ್ಲಿ ಪಡೆದ ಆಂತರಿಕ ಅಂಕಗಳೇ ಅಂತಿಮವಾಗಿರುತ್ತವೆ.
7. ಖಾಸಗಿ ಹಾಗೂ ಖಾಸಗಿ ಪುನರಾವರ್ತಿತ ಅಭ್ಯರ್ಥಿಗಳಿಗೂ 80 ಅಂಕಗಳಿಗೆ ಪರೀಕ್ಷೆ ಇದ್ದು, ಆಂತರಿಕ ಅಂಕಗಳು ಇರುವುದಿಲ್ಲ. ಆದರೆ 80 ಅಂಕಗಳ ಪ್ರಶ್ನೆಪತ್ರಿಕೆಯಲ್ಲಿ ಪಡೆದ ಅಂಕಗಳನ್ನು ಪರಿಗಣಿಸಿ 100ಕ್ಕೆ **Scale up** ಮಾಡಲಾಗುವುದು.
8. ಪರೀಕ್ಷೆ–1ರಲ್ಲಿ ಮೊದಲ ಬಾರಿಗೆ ಎಲ್ಲಾ ವಿಷಯಗಳಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳು ಸಹ ಫಲಿತಾಂಶ ಉತ್ತಮಪಡಿಸಿಕೊಳ್ಳಲು ಇಚ್ಛಿಸಿದ್ದಲ್ಲಿ, ಪರೀಕ್ಷೆ–2 ಅಥವಾ 3ನ್ನು ತೆಗೆದುಕೊಳ್ಳಬಹುದು.
9. ಫಲಿತಾಂಶ ಉತ್ತಮಪಡಿಸಿಕೊಳ್ಳಲು ವಿದ್ಯಾರ್ಥಿಯು ಪರೀಕ್ಷೆ–1ರ ನಂತರ ಪರೀಕ್ಷೆ–2 ಅಥವಾ 3ಕ್ಕೆ ಹಾಜರಾಗಿದ್ದರೆ, ಹಾಜರಾದ ಪರೀಕ್ಷೆಗಳ ವಿಷಯಗಳಲ್ಲಿ ಗಳಿಸಿದ ಅತಿ ಹೆಚ್ಚು ಅಂಕಗಳನ್ನು (**Highest among Exam-2 or 3**) ಫಲಿತಾಂಶ ಪ್ರಕಟಣೆಗೆ ಪರಿಗಣಿಸಲಾಗುವುದು.
10. ಎರಡು ವರ್ಷಗಳ ಅವಧಿಯಲ್ಲಿ ಯಾವುದಾದರೂ ಒಂದು ವಿಷಯ ಅಥವಾ ಎಲ್ಲಾ ವಿಷಯಗಳ ಪರೀಕ್ಷೆಗೆ ಹಾಜರಾಗಿ ಫಲಿತಾಂಶವನ್ನು ಉತ್ತಮಪಡಿಸಿಕೊಳ್ಳಬಹುದಾಗಿದೆ.
11. ಪರೀಕ್ಷೆ–1ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪುನ: ಪರೀಕ್ಷೆ ಬರೆಯಲು ಪರೀಕ್ಷೆ–1 ಸೇರಿದಂತೆ ಒಟ್ಟು ಸತತ ಆರು (06) ಅವಕಾಶಗಳಿರುತ್ತವೆ.
12. ಪರೀಕ್ಷೆಯಲ್ಲಿ ತೇರ್ಗಡೆಯಾಗುವ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡುವ ಸಲುವಾಗಿ ಒಂದು ಬಾರಿ ಮಾತ್ರ ನಿಗದಿತ ಶುಲ್ಕವನ್ನು ಪಡೆಯಲಾಗುವುದು.
13. ಪರೀಕ್ಷೆ–1ರಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳು ಪರೀಕ್ಷೆ–2 & ಪರೀಕ್ಷೆ–3ನ್ನು ತೆಗೆದುಕೊಳ್ಳಲು ಇಚ್ಛಿಸದಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಪರೀಕ್ಷೆ–1ರ ಫಲಿತಾಂಶದ ನಂತರ ಅಂಕಪಟ್ಟಿಯನ್ನು ವಿತರಿಸಲಾಗುವುದು.
14. ಆಯಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗೆ ಅಂಕಪಟ್ಟಿಯು ತುರ್ತಾಗಿ ಅಗತ್ಯವಿದ್ದಲ್ಲಿ ಡಿಜಿಲಾಕರ್‌ನಲ್ಲಿ ಲಭ್ಯಪಡಿಸಲಾಗುವುದು.
15. ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಓದುಗಾರರ/ಬರಹಗಾರರನ್ನು (**Scribe**) ಉಪಯೋಗಿಸಿಕೊಳ್ಳಲು ಅವಕಾಶವಿರುತ್ತದೆ.
16. ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಪ್ರಶ್ನೆಗಳಿಗೆ ಉತ್ತರಿಸಲು ಹೆಚ್ಚುವರಿ ಸಮಯಾವಕಾಶವನ್ನು ನೀಡಲಾಗಿದೆ.
17. ಆಟಿಸಂ ನ್ಯೂನತೆ ಹೊಂದಿರುವ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೊಠಡಿಯಲ್ಲಿ ಅಗತ್ಯ ಮಾರ್ಗದರ್ಶನ ಮಾಡಲು ಸದರಿ ವಿದ್ಯಾರ್ಥಿಗಳ ಶಿಕ್ಷಕರು/ಪರಿಚಿತವಿರುವ ವಯಸ್ಕ ಪ್ರೋತ್ಸಾಹಕ (**Adult Prompter**)ರನ್ನು ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.
18. ಉಳಿದಂತೆ ಕಲಿಕಾ ನ್ಯೂನತೆ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಹಿಂದಿನ ಸಾಲಿನಲ್ಲಿ ನೀಡಲಾಗಿದ್ದ ಎಲ್ಲಾ ಸೌಲಭ್ಯಗಳನ್ನು ಮುಂದುವರೆಸಲಾಗಿದೆ.

ನಿರ್ದೇಶಕರು (ಪರೀಕ್ಷೆಗಳು)
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,
ಬೆಂಗಳೂರು

ಅಧ್ಯಕ್ಷರು
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,
ಬೆಂಗಳೂರು